**Bangalore**
**Regional News**
**06.08.2025 / 2.30 PM**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ದಿಢೀರ್ ಭೇಟಿ - ಚಿಕಿತ್ಸೆ ಕುರಿತಂತೆ ರೋಗಿಗಳಿಂದ ಮಾಹಿತಿ

೨. ಧರ್ಮಸ್ಥಳ ಪ್ರಕರಣ - ಇಂದು ೧೩ನೇ ಸಮಾಧಿ ಸ್ಥಳದಲ್ಲಿ ಉತ್ಖನನ ಕಾರ್ಯ

೩. ಕೈಗಾ ಅಣುವಿದ್ಯುತ್ ಸ್ಥಾವರದ ೫ ಮತ್ತು ೬ನೇ ಘಟಕದಿಂದ ೨೦೩೦ರವೇಳೆಗೆ ವಿದ್ಯುತ್ ಉತ್ಪಾದನೆ

೪. ರಾಜ್ಯದ ವಿವಿಧೆಡೆ ಧಾರಾಕಾರ ಮಳೆ - ಹವಾಮಾನ ಇಲಾಖೆ ಮುನ್ನೆಚ್ಚರಿಕೆ

><><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಅನಿರೀಕ್ಷಿತ ಭೇಟಿ ನೀಡಿದ್ದಾರೆ. ಮುಖ್ಯಮಂತ್ರಿಯವರೊಂದಿಗೆ ಉನ್ನತ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಅವರು ರೋಗಿಗಳೊಂದಿಗೆ ಸಮಾಲೋಚನೆ ನಡೆಸಿದ್ದಾರೆ.ಸಕಾಲದಲ್ಲಿ ಸೂಕ್ತ ಚಿಕಿತ್ಸೆ ದೊರಕುತ್ತಿದೆಯೇ, ಚಿಕಿತ್ಸೆ ಪಡೆಯುವಲ್ಲಿ ಏನಾದರೂ ಅಡೆತಡೆಗಳಿವೆಯೇ.. ಎಂದು ಕೇಳಿದ್ದಾರೆ. ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿ ಸ್ಪಂದನೆ ಹೇಗಿದೆ ಎಂಬುದನ್ನು ಸ್ವತಃ ರೋಗಿಗಳಿಂದಲೇ ಮಾಹಿತಿ ಪಡೆದರು.

><><><><><><

ಧರ್ಮಸ್ಥಳದಲ್ಲಿ ಶವಗಳನ್ನು ಸಾಮೂಹಿಕವಾಗಿ ಹೂತ ಪ್ರಕರಣಕ್ಕೆ ಇಂದು ಸಂಬಂಧಿಸಿದಂತೆ ಗುರುತಿಸಿರುವ ೧೩ನೇ ಹಾಗೂ ಅಂತಿಮ ಸ್ಥಳದಲ್ಲಿ ಇಂದು ವಿಶೇಷ ತನಿಖಾ ತಂಡ ಉತ್ಖನನ ಕಾರ್ಯ ಪೂರ್ಣಗೊಳಿಸುವ ಸಾಧ್ಯತೆ ಇದೆ.ನೇತ್ರಾವತಿ - ಅಜಿಕುರಿ ರಸ್ತೆಯ ಬಳಿ ಇರುವ ೧೩ನೇ ಸ್ಥಳದಲ್ಲಿ ಉತ್ಖನನಕ್ಕೆ ಸಿದ್ಧತೆಗಳು ನಡೆಯುತ್ತಿವೆ. ಹೊಸದಾಗಿ ಗುರುತಿಸಲಾದ ಸ್ಥಳವನ್ನು ೧೪ ಎಂದು ನಮೂದಿಸ ಲಾಗಿದೆ. ಈ ಸ್ಥಳದಿಂದ ಈಗಾಗಲೇ ಅಧಿಕಾರಿಗಳು ಅನೇಕ ಮೂಳೆಗಳನ್ನು

ವಶಪಡಿಸಿಕೊಂಡಿದ್ದಾರೆ. ಇಂದು ಸಾಮಾಜಿಕ ಕಾರ್ಯಕರ್ತ ಜಯಂತ್ ಅವರನ್ನು ಎಸ್‌ಐಟಿ ತನಿಖಾಧಿಕಾರಿಗಳು ವಿಚಾರಣೆ ನಡೆಸುವ ನಿರೀಕ್ಷೆ ಇದೆ. ಈ ನಡುವೆ ಎಸ್ ಐ ಟಿ ಮುಖ್ಯಸ್ಥ ಪ್ರಣವ್ ಮೊಹಂತಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

><><><><><><><

ಕೈಗಾ ಅಣುವಿದ್ಯುತ್ ಸ್ಥಾವರದ ೫ ಮತ್ತು ೬ನೇ ಘಟಕವು ೨೦೩೦ರ ವೇಳೆಗೆ ಸಿದ್ಧಗೊಂಡು, ವಿದ್ಯುತ್ ಉತ್ಪಾದನೆ ಆರಂಭಿಸಲಿದೆ ಎಂದು ಎನ್.ಪಿ.ಸಿ.ಐ.ಎಲ್ ಕೈಗಾ ಘಟಕದ ನಿರ್ದೇಶಕ ಬಿ.ವಿನೋದಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು. ೫ ಮತ್ತು ೬ ನೇ ಘಟಕಗಳು ತಲಾ ೭೦೦ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ಹೊಂದಲಿವೆ. ಇದು ಸುಮಾರು ೨೧ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿದ್ದು, ಸುಧಾರಿತ ತಂತ್ರಜ್ಞಾನದಡಿಯಲ್ಲಿ ಕಾರ್ಯನಿರ್ವಹಿಸಲಿದೆ. ಈಗಾಗಲೇ ಘಟಕದ ಕಾಮಗಾರಿ ಪ್ರಗತಿಯ ಹಂತದಲ್ಲಿದೆ ಎಂದು ಮಾಹಿತಿ ನೀಡಿದ್ದಾರೆ. ಕೈಗಾದ ನಾಲ್ಕೂ ಘಟಕಗಳು ನಿರ್ಧಾರಿತ ಕ್ಷಮತೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದಿವೆ. ವಾಣಿಜ್ಯಾತ್ಮಕವಾಗಿ ಈವರಗೆ ಕೈಗಾ ವಿದ್ಯುತ್ ಉತ್ಪಾದನಾ ಕೇಂದ್ರವು ೧೩ ಸಾವಿರ ಕೋಟಿ ಯುನಿಟ್ ವಿದ್ಯುತ್ ಉತ್ಪಾದನೆ ಮಾಡಿ ಸುಮಾರು ೧.೨ ಲಕ್ಷ ಟನ್ ಕಾರ್ಬನ್ ಡೈ ಆಕ್ಸೈಡ್ ಉತ್ಪಾದನೆಯನ್ನು ತಡೆಗಟ್ಟಿದೆ ಎಂದು ಹೇಳಿದ್ದಾರೆ.

><><><><><><><

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಇಂದು ಕುಟುಂಬ ಸದಸ್ಯರೊಂದಿಗೆ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಅಂಜನಾದ್ರಿ ಬೆಟ್ಟವೇರಿ ಆಂಜನೇಯಸ್ವಾಮಿ ದರ್ಶನ ಪಡೆದರು. ಅಂಜನಾದ್ರಿ ಪಾದಗಟ್ಟೆಯಲ್ಲಿ ವಿಶೇಷ ಪೂಜೆ ಮತ್ತು ಪ್ರಾರ್ಥನೆ ಸಲ್ಲಿಸಿದ ನಂತರ ಬೆಟ್ಟದ ೫೭೫ ಮೆಟ್ಟಿಲುಗಳನ್ನು ೩೦ ನಿಮಿಷದಲ್ಲಿ ಏರಿದರು. ನಂತರ ಆಂಜನೇಯ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಡಳಿತ ವತಿಯಿಂದ ರಾಜ್ಯಪಾಲರನ್ನು ಸನ್ಮಾನಿಸಲಾಯಿತು.

><><><><><><><

ಕೋಲಾರ ಜಿಲ್ಲೆಯ ವೇಮಗಲ್ ನ ಕುರುಗಲ್ ಪಟ್ಟಣ ಪಂಚಾಯಿತಿಯ ಚುನಾವಣೆಗೆ ೮೩ ಮಂದಿ ನಾಮಪತ್ರ ಸಲ್ಲಿಸಿದ್ದಾರೆ. ಕಾಂಗ್ರೆಸ್ ನಿಂದ ೧೭, ಮೈತ್ರಿ ಪಕ್ಷಗಳಾದ ಬಿಜೆಪಿಯಿಂದ ೮, ಜೆಡಿಎಸ್‌ನಿಂದ ೭ ಅಮ್ ಆದ್ಮಿ ಪಕ್ಷದಿಂದ ನಾಲ್ವರು, ಪಕ್ಷೇತರವಾಗಿ ೪೪ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಇಂದು ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯುತ್ತಿದೆ. ಅಭ್ಯರ್ಥಿಗಳು ಮನೆ ಮನೆಗೆ ತೆರಳಿ ಮತಯಾಚನೆ ಮಾಡುತ್ತಿದ್ದಾರೆ. ಆಗಸ್ಟ್ ೧೭ ರಂದು ೧೭ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

><><><><><><

ಭಾರತ- ಪಾಕಿಸ್ತಾನದ ನಡುವೆ ನಡೆದ ೧೯೬೫ ಮತ್ತು ೧೯೭೧ರ ಯುದ್ಧಗಳಲ್ಲಿ ಪಾಲ್ಗೊಂಡ ಹಳೆಯ ಯುದ್ಧ ಟ್ಯಾಂಕ್ ಟಿ-೫೫ ಮಂಗಳೂರು ತಲುಪಿದೆ. ಮಂಗಳೂರಿಗೆ ವಿಶೇಷ ಆಕರ್ಷಣೆಯಾಗಿ ಹಾಗೂ ಸೇನೆ ಸೇರುವುದಕ್ಕೆ ಸ್ಫೂರ್ತಿಯಾಗಿ ಈ ಯುದ್ಧ ಟ್ಯಾಂಕ್‌ನ್ನು ಪ್ರದರ್ಶಿಸುವ ಉದ್ದೇಶ ಹೊಂದಲಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಪೂನಾದ ಕಿರ್ಕಿ ಎಂಬಲ್ಲಿನ ಡಿಪೋದಿಂದ ವಿಶೇಷ ಟ್ರೈಲರ್ ಟ್ರಕ್‌ನಲ್ಲಿ ೪೦ ಟನ್ ತೂಕದ ಈ ಟಿ-೫೫ ಟ್ಯಾಂಕ್‌ನ್ನು ಮಂಗಳೂರಿಗೆ ತರಲಾಗಿದೆ.

><><><><><><

ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ಶಿವಮೊಗ್ಗ ಹಾಗೂ ಸಾಗರ, ಹೊಸನಗರ ತಾಲೂಕಿನ ಬೆಳ್ಳೂರು ಗ್ರಾಮದಲ್ಲಿ ಭಾರೀ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಹಳ್ಳಕೊಳ್ಳ ಉಕ್ಕಿ ಹರಿಯುತ್ತಿದ್ದು ರಸ್ತೆ ಮೇಲೆಯೇ ಮಳೆಯ ನೀರು ಹರಿಯುತ್ತಿದೆ, ಭತ್ತದ ಗದ್ದೆಗಳು ಜಲಾವೃತಗೊಂಡಿವೆ. ಜೋರು ಮಳೆಯಿಂದಾಗಿ ನದಿಗಳ ನೀರಿನ ಮಟ್ಟ ಮತ್ತಷ್ಟು ಏರಿಕೆಯಾಗಿದೆ. ಕಾಡಿನೊಳಗೆ ಹಳ್ಳಗಳು ಭೋರ್ಗರೆಯುತ್ತಿವೆ.

><><><><><><

ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಇಂದು ವ್ಯಾಪಕವಾಗಿ ವ್ಯಾಪಕ ಮಳೆಯಾಗಿದೆ. ವಿಜಯಪುರದಲ್ಲಿ ೧೫ ಸೆಂಟಿ ಮೀಟರ್, ಉತ್ತರ ಕನ್ನಡ ಜಿಲ್ಲೆಯ ಮಂಕಿ, ಗದಗದ ಲಕ್ಷ್ಮೇಶ್ವರದಲ್ಲಿ ೧೩ ಸೆಂಟಿ ಮೀಟರ್ ಮಳೆಯಾಗಿದೆ. ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಇಂದಿನಿಂದ ಇದೇ ೧೨ರವರೆಗೆ ವ್ಯಾಪಕ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಉತ್ತರ ಕನ್ನಡ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಕೆವೆಡೆ ಭಾರೀ ಮಳೆಯಾಗಲಿದೆ. ಇಂದು ಕರಾವಳಿ

ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಬೆಳಗಾವಿ, ಧಾರವಾಡ, ಗದಗ, ವಿಜಯಪುರ ಜಿಲ್ಲೆಗಳಲ್ಲೂ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಎಚ್ಚರಿಕೆ ನೀಡಿದ್ದಾರೆ.

ಧ್ವನಿ : ಡಾ.ಸಿ.ಎಸ್.ಪಾಟೀಲ್, ಹವಮಾನ ಇಲಾಖೆ ನಿರ್ದೇಶಕ (೪೫ ಸೆಕೆಂಡುಗಳು)

><><><><><><><

ರಕ್ತನಾಳಗಳಲ್ಲಿನ ಹಲವು ಸಮಸ್ಯೆಗಳು ಹೃದಯಾಘಾತ, ಗ್ಯಾಂಗ್ರೀನ್, ಪಾರ್ಶ್ವವಾಯು ಮತ್ತಿತರ ಗಂಭೀರ ಕಾಯಿಲೆಗಳಿಗೆ ಕಾರಣವಾಗುತ್ತಿದೆ. ರಕ್ತನಾಳಗಳ ಸಮಸ್ಯೆಗಳು ಮತ್ತು ತೊಂದರೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಅಗತ್ಯ ಎಂದು ಚಿಕ್ಕಬಳ್ಳಾಪುರದ ರಕ್ತನಾಳ ತಜ್ಞ ಡಾ.ಸುನಿಲ್ ಸುಭಾಷ್ ಜೋಷಿ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಂದಿ ವೈದ್ಯಕೀಯ ವಿಜ್ಞಾನಗಳ ಕಾಲೇಜು ಹಾಗೂ ರಕ್ತನಾಳಗಳ ತಜ್ಞರ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಕ್ತನಾಳ ಸಮಸ್ಯೆಗಳ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

><><><><><><><

ಕೇಂದ್ರ ಹಣಕಾಸು ಸೇವೆಗಳ ಇಲಾಖೆ ವತಿಯಿಂದ ರಾಜ್ಯದ ವಿವಿಧೆಡೆ ಇಂದು ಪರಿಪೂರ್ಣತಾ ಅಭಿಯಾನ ನಡೆಯುತ್ತಿದೆ. ಉತ್ತರ ಕನ್ನಡ ಜಿಲ್ಲೆಯ ಮುಂಡೇಲಿನ್ ಗ್ರಾಮ ಪಂಚಾಯಿತಿ, ಕೆಳಗಿನೋರ್ ಗ್ರಾಮ ಪಂಚಾಯಿತಿ, ಬಜಾರ್‌ಕುಲಾಂಗ್ ಗ್ರಾಮಪಂಚಾಯಿತಿ ಸೇರಿದಂತೆ ಹಲವೆಡೆ, ಕೆನರಾ ಬ್ಯಾಂಕ್ ಸಹಯೋಗದಲ್ಲಿ ಕೇಂದ್ರ ಸರ್ಕಾರದ ಹಲವು ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಯಿತು. ಅಭಿಯಾನದ ಭಾಗವಾಗಿ ಬೆಂಗಳೂರು ದಕ್ಷಿಣದ ಕದಂಕನಹಳ್ಳಿಯಲ್ಲಿ ಆಯೋಜಿಸಿದ್ದ ಜನ ಸುರಕ್ಷಾ ಶಿಬಿರದಲ್ಲಿ ಪ್ರಧಾನಮಂತ್ರಿ ಜನ್‌ಧನ್ ಯೋಜನೆ ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಕುರಿತಂತೆ ಮಾಹಿತಿ ನೀಡಲಾಯಿತು. ಇನ್ನೊಂದೆಡೆ ಕನಕಪುರದ ಕೊಳಗೊಂಡನಹಳ್ಳಿಯ ಜನರಿಗೆ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನದ ಭಾಗವಾಗಿ ಹಲವು ಯೋಜನೆಗಳ ಬಗ್ಗೆ ಮಾಹಿತಿ ನೀಡಿ ಅರ್ಜಿಗಳನ್ನು ಸ್ವೀಕರಿಸಲಾಯಿತು.

><><><><><><><

೨೦೨೫-೨೬ನೇ ಸಾಲಿನಲ್ಲಿ ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ವಿಜಯನಗರ ಜಿಲ್ಲಾ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದಲ್ಲಿ ಒದಗಿಸಲು ಹಾಗೂ ಜಿಲ್ಲೆಯಲ್ಲಿ ಯಂತ್ರಧಾರೆ ಕೇಂದ್ರಗಳನ್ನು ಇನ್ನಷ್ಟು ಬಲ ಪಡಿಸುವ ನಿಟ್ಟಿನಲ್ಲಿ ಪರಿಶಿಷ್ಟ ಜಾತಿಯ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ವಿಜಯಪುರ ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಿ.ಟಿ.ಮಂಜುನಾಥ ತಿಳಿಸಿದ್ದಾರೆ.

><><><><><><><